# ಕರ್ನಾಟಕ ಸರ್ಕಾರ

ಸಂಖೆ: ಗ್ರಾಅಪ 45 ಗ್ರಾನೀಸ(2)13

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ **25.09.2013**

## ಸುತ್ತೋಲೆ

ವಿಷಯ: ರೂ.5.00 ಲಕ್ಷ ಮಿತಿಯೊಳಗಿನ ಗ್ರಾಮೀಣ ಕುಡಿಯುವ ನೀರಿನ ಸರಬರಾಜು ಕೆ.ಟಿ.ಪಿ.ಪಿ ಕಾಯ್ದೆಯಡಿ ವಿನಾಯಿತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 33 ಶಾಸನ 2001, ಬೆಂಗಳೂರು, ದಿನಾಂಕ 25.08.2001
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 45 ಗ್ರಾನೀಸ(2)09, ದಿನಾಂಕ 09.11.2011, 08.12.2011 ಹಾಗೂ 18.08.2012
3. ಸರ್ಕಾರದ ಸುತ್ತೋಲೆ ಸಂಖ್ಯೆ :ಗ್ರಾಅಪ 140 1 ಆರ್‌ಆರ್‌ಸಿ 2013 ದಿನಾಂಕ 27.07.2013.

ಗ್ರಾಮೀಣ ಪ್ರದೇಶಗಳಲ್ಲಿ ಟಾಸ್ಕಫೋರ್ಸ್‌ನಡಿ ಅನುಮೋದಿತ ತುರ್ತು ಕುಡಿಯುವ ನೀರಿನ ಯೋಜನೆಗಳು ಹಾಗೂ NRDWPಯಡಿ ಅನುಮೋದನೆಯಾಗಿರುವ ರೂ.5.00 ಲಕ್ಷ ಮಿತಿಯೊಳಗಿನ ಎಲ್ಲಾ ಕುಡಿಯುವ ನೀರು ಸರಬರಾಜು ಯೋಜನೆಗಳ ಕಾಮಗಾರಿಗಳನ್ನು ಉಲ್ಲೇಖ(2)ರ ರೀತ್ಯಾ ಜಿಲ್ಲಾ ಪಂಚಾಯತ್ ಹಂತದಲ್ಲಿಯೇ ಅನುಮೋದಿಸಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮುಖೇನ ಅಗತ್ಯವಿರುವ ತಾಂತ್ರಿಕ ಅನುಮೋದನೆ ನೀಡಿ ಕಾಮಗಾರಿಗಳನ್ನು ಸಾರ್ವಜನಿಕ ಹಿತಾಸಕ್ತಿಯ ಮೇರೆಗೆ ಉತ್ತಮ ಗುಣಮಟ್ಟದಲ್ಲಿ ಅನುಷ್ಠಾನಗೊಳಿಸಿ, ಸಂಬಂಧಪಟ್ಟ ಸ್ಥಳೀಯ ಗ್ರಾಮ ಪಂಚಾಯತಿಗಳ ವಶಕ್ಕೆ ಆಸ್ತಿದಾಯಿತ್ವ ದಾಖಲೆ ಹಾಗೂ ಮುಂದಿನ ನಿರ್ವಹಣೆ ಸಲುವಾಗಿ ಮಾಹಿತಿ ನೀಡಲು ತಿಳಿಸಲಾಗಿದೆ.

ಈಗಾಗಲೇ ಉಲ್ಲೇಖ(1) ರ ಅಧಿಸೂಚನೆಯಲ್ಲಿ ಜಿಲ್ಲಾ ಪಂಚಾಯತಿಗಳಿಂದ <u>ಐದು ಲಕ್ಷ ರೂಪಾಯಿಗಳನ್ನು ಮೀರದಂತಹ</u> ಎಲ್ಲಾ ಬಗೆಯ ನಿರ್ಮಾಣ ಕಾಮಗಾರಿಗಳ ಸಂದರ್ಭದಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕೆ.ಟಿ.ಪಿ.ಪಿ ಕಾಯ್ದೆಯಡಿ ವಿನಾಯಿತಿ ಇರುತ್ತದೆ. ಕುಡಿಯುವ ನೀರಿನ ಯೋಜನೆಗಳು ಹಾಗೂ NRDWPಯಡಿ ಅನುಮೋದನೆಯಾಗಿರುವ ಕಾಮಗಾರಿಗಳನ್ನು ಈ ಕೆಳಕಂಡ ಷರತ್ತು ಹಾಗೂ ನಿಬಂಧನೆಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

1. ಉಲ್ಲೇಖಿತ(3) ರಲ್ಲಿ ಹೇಳಲಾದ <u>ರೂ. ಒಂದು ಲಕ್ಷದ ಬದಲು ರೂ.ಐದು ಲಕ್ಷಗಳೆಂದು ಓದಿಕೊಳ್ಳುವುದು</u> ಹಾಗೂ ಸದರಿ ಸುತ್ತೋಲೆಯಲ್ಲಿನ ನಿರ್ದೇಶನ ಗ್ರಾಮೀಣ ನೀರು ಸರಬರಾಜು ಯೋಜನೆಗಳ ಅನುಷ್ಠಾನಕ್ಕೆ ಅನ್ವಯಿಸುವುದಿಲ್ಲವೆಂದು ತಿಳಿಯುವುದು. ಆದರೆ ಉಲ್ಲೇಖ (2) ಮತ್ತು (3) ರಲ್ಲಿನ ಉಳಿದೆಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
2. ಗುತ್ತಿಗೆದಾರರೊಂದಿಗೆ ಇ-ಸ್ಟಾಂಪ್ ಪೇಪರಿನಲ್ಲಿ ಅವರ ಭಾವಚಿತ್ರವಿರುವ ಒಪ್ಪಂದ ಪತ್ರ ಮಾಡಿಸುವುದು

3. ಗುತ್ತಿಗೆದಾರರಿಗೆ ಕಾಮಗಾರಿಗಳಿಗೆ- ಸಂಬಂಧಿಸಿದಂತೆ ಪೂರ್ಣ ಬಿಲ್ ಪಾವತಿಸುವ ಮೊದಲು ಕಾಮಗಾರಿ ಪೂರ್ಣಗೊಂಡಿರುವ ಕುರಿತು ಛಾಯಚಿತ್ರ ಪಡೆದು RTGS ಮೂಲಕ ಹಣ ಸಂದಾಯ ಮಾಡುವುದು, ಹಾಗೂ ವಿವರಗಳನ್ನು IMISನಲ್ಲಿ ದಾಖಲಿಸುವುದು.

(ರಾಮಕೃಷ್ಣ)
ಸರ್ಕಾರದ ಉಪಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
ದೂ:080-2203 2806, ಫ್ಯಾಕ್ಸ್ 2220 3175
ಇ-ಮೇಲ್ rk3452000@gmail.com

ಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ, ನಂ:55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಜಲ್ದಾರ್ ರಸ್ತೆ, ಶೇಷಾದ್ರಿ ಪುರಂ, ಬೆಂಗಳೂರು,
3. ರಾಜ್ಯದ ಎಲ್ಲಾ(8)ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜನಿಯರಿಂಗ್ ವೃತ್ತಗಳು
4. ರಾಜ್ಯದ ಎಲ್ಲಾ(38)ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗಗಳು,
5. ರಾಜ್ಯದ ಎಲ್ಲಾ(176) ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
6. ರಕ್ಷಾ ಕಡತಕ್ಕೆ-/ ಹೆಚ್ಚುವರಿ ಪ್ರತಿ

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
3. ರಾಜ್ಯದ ಎಲ್ಲಾ (30) ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ಸರ್ಕಾರದ ಕಾರ್ಯದಶಿ, ಕಂದಾಯ ಇಲಾಖೆ(DMC) ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
6. ಇಲಾಖೆಯ ಎಲ್ಲಾ ನಿದೇಶಕರುಗಳು/ಅಂತರಿಕ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
7. ವಿಶೇಷಾಧಿಕಾರಿಗಳು ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ(PWD- ಆರ್ಥಿಕ ಕೋಶ) ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
8. ನಿರ್ದೇಶಕರು(SWSM) ಹಾಗೂ ಸರ್ಕಾರದ ಅಪರ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
9. ಮುಖ್ಯಸ್ಥರು, ಗ್ರಾಮ ಸ್ವರಾಜ್, ಎಂಎಸ್‌ಐಎಲ್ ಬಿಲ್ಡಿಂಗ್, ಬೆಂಗಳೂರು ರವರ ಆಪ್ತ ಸಹಾಯಕರು
10. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಚಿನ್ನಸ್ವಾಮಿ ಕ್ರೀಡಾಂಗಣ, ರಾಜಭವನ ರಸ್ತೆ, ಬೆಂಗಳೂರುಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ ಕೋರಿದೆ
11. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ. ಪಂರಾಜ್ ಇಲಾಖೆ